ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಕುಂದಾಪುರ ತಾಲ್ಲೂಕಿನ ಕೋಡಿಯಲ್ಲಿ ಮೀನುಗಾರಿಕಾ ಜಟ್ಟಿ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 619 (1375)

ಶ್ರೀ ಕೆ.ಪ್ರತಾಪಚಂದ್ರಶೆಟ್ಟಿ (ಕುಂದಾಪುರ):- ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನ ಕೋಡಿಯಲ್ಲಿ ಮೀನುಗಾರಿಕಾ ಜಟ್ಟಿ ಮಾಡುವ ಯೋಜನೆ ಸರ್ಕಾರದವರ ಮುಂದಿದೆಯೇ?

ಆ) ಇಲ್ಲದಿದ್ದಲ್ಲಿ ಯಾವ ಬದಲಿ ವ್ಯವಸ್ಥೆ ಮಾಡಲಾಗುವುದು?

ಶ್ರೀ ಕೆ.ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):-

ಅ) ಇಲ್ಲ.

ಆ) ಇದೇ ತಾಲ್ಲೂಕಿನಲ್ಲಿ ಕುಂದಾಪುರ ಕೋಡಿ ಹತ್ತಿರವಿರುವ ಗಂಗೊಳ್ಳಿಯಲ್ಲಿ ಮೀನುಗಾರಿಕಾ ಜಟ್ಟಿ : ಧಕ್ಕೆ ನಿರ್ಮಿಸಲು ಉದ್ದೇಶಿಸಲಾಗಿದೆ.

ವಿಷಯ:- ಶಾಸನ ಸಭೆ ಅಂಗೀಕರಿಸಿದ ಕಾಯಿದೆಗಳಿಗೆ ನಿಯಮಗಳ ರಚನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 620 (1502)

ಶ್ರೀ ಡಿ.ಆರ್.ಪಾಟೀಲ್ (ಗದಗ್):- ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷದ ಅವಧಿಯಲ್ಲಿ ರಾಜ್ಯ ಶಾಸನ ಸಭೆಗಳು ಅಂಗೀಕರಿಸಿದ ಎಷ್ಟು ಕಾಯ್ದೆಗಳು ನಿಯಮಗಳು (ರೂಲ್ಸ್) ರಚನೆಯಾಗದೆ ಉಳಿದಿವೆ?

ಆ) ಈ ಕಾಯ್ದೆಗಳಿಗೆ ನಿಯಮಗಳ ರಚನೆಯಾಗದಿರಲು ಕಾರಣಗಳೇನು?

ಇ) ಕಾಲಮಿತಿಗೊಳಪಟ್ಟು ಎಲ್ಲಾ ಕಾಯ್ದೆಗಳಿಗೆ ನಿಯಮಗಳನ್ನು ರಚಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):-

ಅ) ಕಳೆದ ಮೂರು ವರ್ಷದ ಅವಧಿಯಲ್ಲಿ ರಾಜ್ಯ ಶಾಸನ ಸಭೆಗಳು ಅಂಗೀಕರಿಸಿದ ಮೂಲ ಕಾಯ್ದೆಗಳಲ್ಲಿ 9 ಅಧಿನಿಯಮಗಳಿಗೆ ನಿಯಮಗಳನ್ನು ರಚಿಸಲಾಗಿಲ್ಲ. ಅವುಗಳು ಎಂದರೆ:-

1. ಯೋಜನೆಯಿಂದ ಸ್ಥಳಾಂತರಿತ ವ್ಯಕ್ತಿಗಳ ಪುನರ್ ವ್ಯವಸ್ಥೆಯ ಕರ್ನಾಟಕ ಅಧಿನಿಯಮ, 1987 (1994ರ ಕರ್ನಾಟಕ ಅಧಿನಿಯಮ ಸಂಖ್ಯೆ:24)
2. ಕೂಡಲ ಸಂಗಮ ಅಭಿವೃದ್ಧಿ ಮಂಡಲಿ ಅಧಿನಿಯಮ, 1994 (1994ರ 37)
3. ವಿಶೇಷ ನ್ಯಾಯಾಧಿಕರಣ ಅಧಿನಿಯಮ, 1994 (1994ರ 41)
4. ಕರ್ನಾಟಕ ಮಾನ್ಯತೆ ಪಡೆಯದ ಮತ್ತು ಸಂಯೋಜಿತವಾಗಿಲ್ಲದ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ ಅಧಿನಿಯಮ, 1992 (1993ರ 7)
5. ಕರ್ನಾಟಕ ಎಜ್ಯುಕೇಷನ್ ಆಕ್ಟ್, 1983 (1995ರ 1)
6. ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994 (1994ರ 31)
7. ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994 (1994ರ 38)
8. ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧಿನಿಯಮ, 1995 (1995ರ 17)
9. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ, 1995 (1995ರ 28)

ಆ) ಮೇಲಿನ ಎಲ್ಲಾ ಅಧಿನಿಯಮಗಳ ಅಡಿಯಲ್ಲಿ ನಿಯಮಗಳನ್ನು ರಚಿಸಲು ಕ್ರಮ ಕೈಗೊಳ್ಳಲಾಗಿದ್ದು ಅವುಗಳು ನಾನಾ ಹಂತದಲ್ಲಿ ಇವೆ.

ಇ) ಕ್ರಮ ಕೈಗೊಳ್ಳಲಾಗುವುದು.

ವಿಷಯ:- ದೆಹಲಿಯಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಕಛೇರಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 622 (1195)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ):- ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೆಹಲಿಯಲ್ಲಿ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಕಛೇರಿ ಇದೆಯೇ?